ಕರ್ನಾಟಕ ಸರ್ಕಾರ

ಪರೀಕ್ಷಾ ತುರ್ತು

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ. ಮಲ್ಲೇಶ್ವರಂ. ಬೆಂಗಳೂರು

*********************************************************************************

**ಸಂಖ್ಯೆ : ಸಿ2/ಗಣಕಶಾಖೆ/ಮೌ.ಮಾ.ಆ/01/2020–21** **ದಿನಾಂಕ: 18.06.2020**

**:: ಸುತ್ತೋಲೆ ::**

**ವಿಷಯ** : ಜೂನ್/ಜುಲೈ 2020ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯದ ಉಪಮುಖ್ಯ ಮೌಲ್ಯಮಾಪಕರು ಹಾಗೂ ಸಹಾಯಕ ಮೌಲ್ಯಮಾಪಕರ ಆದೇಶಗಳನ್ನು ಶಾಲಾ ಲಾಗಿನ್ ಮತ್ತು ಬಿ.ಇ.ಒ ಲಾಗಿನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಜೂನ್/ಜುಲೈ 2020ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯವು ದಿನಾಂಕ 13.07.2020ರಿಂದ ಪ್ರಾರಂಭವಾಗುತ್ತಿದ್ದು, ಈ ಸಂಬಂಧ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯ ಶಿಕ್ಷಕರು, ತಮ್ಮ ಶಾಲೆಯಿಂದ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜನೆಗೊಂಡಿರುವ ಉಪಮುಖ್ಯ ಮೌಲ್ಯಮಾಪಕರು ಮತ್ತು ಸಹಾಯಕ ಮೌಲ್ಯಮಾಪಕರ ನೇಮಕಾತಿ ಆದೇಶ ಪತ್ರಗಳನ್ನು ದಿನಾಂಕ 29.06.2020 ರಿಂದ ಆನ್‌ಲೈನ್‌ನಲ್ಲಿ ಮಂಡಳಿಯ ಜಾಲತಾಣದಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ವ್ಯವಸ್ಥೆ ಕಲ್ಪಿಸಲಾಗಿದೆ.

1. ಮಂಡಳಿಯ ಜಾಲತಾಣ www.kseeb.kar.nic.in ನ ಶಾಲಾ ಲಾಗಿನ್‌ನಲ್ಲಿ ಮೌಲ್ಯಮಾಪಕರ ನೇಮಕಾತಿ ಆದೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.
2. ಶಾಲಾ ಲಾಗಿನ್‌ನಲ್ಲಿ Evaluators Detailsನ Drop Down ಮೆನುವಿನಲ್ಲಿರುವ Evaluation Orders July 2020 ರ ಎಂಬ ಆಯ್ಕೆ ಇದ್ದು, DCs Appointment Orders ಮತ್ತು AEs Appointment Order ಮೇಲೆ ಕ್ಲಿಕ್ ಮಾಡಿದಾಗ ನೇಮಕಾತಿ ಆದೇಶ ಪತ್ರಗಳು ಡೌನ್‌ಲೋಡ್ ಆಗುತ್ತದೆ.
3. ಆಯಾ ಶಾಲೆಯ ಮುಖ್ಯ ಶಿಕ್ಷಕರು ತಮ್ಮ ಶಾಲೆಯಿಂದ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜಿಸಿರುವ ಅರ್ಹ ಶಿಕ್ಷಕರ ನೇಮಕಾತಿ ಆದೇಶ ಪತ್ರಗಳನ್ನು ಪರಿಶೀಲಿಸಿ, ಸಂಬಂಧಿಸಿದ ಶಿಕ್ಷಕರಿಗೆ ವಿತರಣೆ ಮಾಡಿ ಕರ್ತವ್ಯದಿಂದ ಬಿಡುಗಡೆಗೊಳಿಸುವುದು.

ಪ್ರತಿ ಜಿಲ್ಲೆ ಮತ್ತು ಬ್ಲಾಕ್/ತಾಲ್ಲೂಕಿನಲ್ಲಿ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜನೆಗೊಂಡಿರುವ ಶಿಕ್ಷಕರ ಮೌಲ್ಯಮಾಪಕರ ಆದೇಶ ಪತ್ರಗಳನ್ನು ಸಂಬಂಧಿಸಿದ ಬ್ಲಾಕ್/ತಾಲ್ಲೂಕಿನ BEO LOGIN ನಲ್ಲಿಯೂ ಸಹ ನೀಡಿದ್ದು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರಿಗೆ ವಿತರಿಸಿ ಕಡ್ಡಾಯವಾಗಿ ಎಲ್ಲಾ ಅರ್ಹ ಶಿಕ್ಷಕರು ಮೌಲ್ಯಮಾಪನ ಕಾರ್ಯಕ್ಕೆ ಹಾಜರಾಗಲು ನಿರ್ದೇಶಿಸುವುದು.

ಮುಂದುವರೆದಂತೆ ಜಿಲ್ಲೆಯ EO LOGIN ನಲ್ಲಿಯೂ ಸಹ ಆಯಾ ಜಿಲ್ಲೆಯ ವಿವಿಧ ವಿಷಯಗಳ ಮೌಲ್ಯಮಾಪನ ಕೇಂದ್ರಗಳಿಗೆ ನೇಮಕ ಮಾಡಿರುವ ಮೌಲ್ಯಮಾಪಕರ ಚೆಕ್‌ಲಿಸ್ಟ್ ನೀಡಿದ್ದು, ಅದರಂತೆ ಆಯಾ ಜಿಲ್ಲೆಯ ಉಪನಿರ್ದೇಶಕರು ಮತ್ತು ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿಗಳು ಮೌಲ್ಯಮಾಪನ ಕಾರ್ಯದ ಉಸ್ತುವಾರಿ ನಿರ್ವಹಿಸುವುದು.

(ಸುಮಂಗಲಾ.ವಿ) 29/6
ನಿರ್ದೇಶಕರು (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ ::

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ– ಶಾಲಾ ಲಾಗಿನ್ ಮೂಲಕ